ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಬಗ್ಗೆ

ಶ್ರೀಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದಚುನಾಯಿತರಾದವರು):-

949 (1214) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯ ಮಾನ್ವಿಯಲ್ಲಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ನಗರದಲ್ಲಿರುವ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜನ್ನು ಯಾವ ಶೈಕ್ಷಣಿಕ ವರ್ಷದಲ್ಲಿ ಪ್ರಾರಂಭಿಸಲಾಗಿದೆ; ತರಗತಿ ಕೊಠಡಿಗಳ ನಿರ್ಮಾಣ ಯಾವ ಹಂತದಲ್ಲಿದೆ; ಬಿಡುಗಡೆಯಾಗಿರುವ ಅನುದಾನ ಎಷ್ಟು?